# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1537 |
| ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 18.03.2021 |
| ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರ.ಸಂ. | ಪ್ರಶ್ನೆ | ಉತ್ತರಗಳು |
|---|---|---|
| ಅ) | ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆಯ ಅಧೀನದಲ್ಲಿ ಎಷ್ಟು ನಿಗಮ/ ಮಂಡಳಿಗಳು ಕಾರ್ಯನಿರ್ವಹಿಸುತ್ತಿವೆ; ಸದರಿ ನಿಗಮ/ ಮಂಡಳಿಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು) | ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆಯ ಅಧೀನದಲ್ಲಿ 04 ನಿಗಮಗಳು ಕಾರ್ಯನಿರ್ವಹಿಸುತ್ತಿವೆ. ಮಂಜೂರಾದ ಹುದ್ದೆಗಳ ವಿವರ ಕೆಳಕಂಡಂತೆ ಇರುತ್ತವೆ.<br>**ಗ್ರೂಪ್-ಎ** 746<br>**ಗ್ರೂಪ್-ಬಿ** 2194<br>**ಗ್ರೂಪ್-ಸಿ** 5664<br>**ಗ್ರೂಪ್-ಡಿ** 2413<br>**ಒಟ್ಟು** 11017 |
| ಆ) | ಅವುಗಳಲ್ಲಿ, ಖಾಯಂ ಗುತ್ತಿಗೆ ಆಧಾರದ ಮೇಲೆ ಮತ್ತು ದಿನಗೂಲಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು; | ಯಾವುದು ಇರುವುದಿಲ್ಲ. |
| ಇ) | ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು) | ಪ್ರಸ್ತುತ 04 ನಿಗಮಗಳಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಕೆಳಕಂಡಂತಿದೆ<br>**ಗ್ರೂಪ್-ಎ** 109<br>**ಗ್ರೂಪ್-ಬಿ** 822<br>**ಗ್ರೂಪ್-ಸಿ** 2739<br>**ಗ್ರೂಪ್-ಡಿ** 924<br>**ಒಟ್ಟು** 4594 |
| ಈ) | ಖಾಲಿಯಿರುವ ಹುದ್ದೆಗಳನ್ನು ನೇಮಕ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಸದರಿ ನೇಮಕಾತಿ ಪ್ರಕ್ರಿಯೆಗಳು ಪ್ರಸ್ತುತ ಯಾವ ಹಂತದಲ್ಲಿವೆ; ಮತ್ತು ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುವುದು; | ಈಗಾಗಲೇ ಕೆ.ಪಿ.ಎಸ್.ಸಿ ಮೂಲಕ 2019ನೇ ಸಾಲಿನಲ್ಲಿ 100 ಸಹಾಯಕ ಇಂಜಿನಿಯರ್ ಹಾಗೂ 89 ಕಿರಿಯ ಇಂಜಿನಿಯರ್ ರವರುಗಳನ್ನು ನೇಮಕಾತಿ ಮಾಡಲಾಗಿದೆ. ಮುಂದುವರೆದು, 2022ನೇ ಸಾಲಿನಲ್ಲಿ 184 ಸಹಾಯಕ ಇಂಜಿನಿಯರ್ (ಕಲ್ಯಾಣ ಕರ್ನಾಟಕ ಭಾಗದ) ರವರನ್ನು ಕರ್ನಾಟಕ ಲೋಕಸೇವಾ ಆಯೋಗದಿಂದ ಆಯ್ಕೆಮಾಡಿ ಇಲಾಖಾ ವಶಕ್ಕೆ ನೀಡಿದೆ ಹಾಗೂ 169 ಕಿರಿಯ ಇಂಜಿನಿಯರ್ ರವರುಗಳ ನೇಮಕಾತಿಗೆ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಉ) | ಇಲ್ಲವಾದಲ್ಲಿ, ನೇಮಕಾತಿ ಮಾಡಿಕೊಳ್ಳದಿರಲು ಕಾರಣಗಳೇನು? | ಇದುವರೆಗೆ ಲೋಕೋಪಯೋಗಿ ಇಲಾಖೆಯೇ ನೇಮಕಾತಿ ಪ್ರಾಧಿಕಾರವಾಗಿದ್ದು, ಸದರಿ ಇಲಾಖೆಯೇ ಖಾಲಿ ಇರುವ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳುತ್ತಿತ್ತು. ಪ್ರಸ್ತುತ ಜಲಸಂಪನ್ಮೂಲ ಇಲಾಖೆಯು ಲೋಕೋಪಯೋಗಿ ಇಲಾಖೆಯಿಂದ ಬೇರ್ಪಡೆಗೊಂಡಿರುತ್ತದೆ. ಜಲಸಂಪನ್ಮೂಲ ಇಲಾಖೆಗೆ ಹಂಚಿಕೆಯಾಗಿರುವ ಹುದ್ದೆಗಳನ್ವಯ ಖಾಲಿ ಹುದ್ದೆಗಳನ್ನು ಗುರುತಿಸಿ ನೇಮಕಾತಿ ಮಾಡಲು ಇನ್ನು ಮುಂದೆ ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಇ-ಜಸಂಇ 42 ಸೇಅವಿ 2021

(ಗೋವಿಂದ ಎಂ. ಕಾರಜೋಳ)
ಜಲಸಂಪನ್ಮೂಲ ಸಚಿವರು

**ಗೋವಿಂದ ಎಂ.ಕಾರಜೋಳ**
**ಜಲ ಸಂಪನ್ಮೂಲ ಇಲಾಖೆ ಸಚಿವರು**
**(ಭಾರಿ ಮತ್ತು ಮಧ್ಯಮ ನೀರಾವರಿ)**